# *4 ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರವರ ನ್ಯಾಯಾಲಯ, ಮೈಸೂರು*

**ಎಸ್‌ಸಿ. 257/2021**

| | | |
|---|---|---|
| **ಸಾಕ್ಷಿದಾರರ ಹೆಸರು** : ಶ್ರೀ ಮಂಜು | | ಪ್ರಮಾಣ ಮಾಡಿಸಿದ ದಿನಾಂಕಃ |
| **ತಂದೆ/ಗಂಡನ ಹೆಸರು** : ಶ್ರೀ ಮಹದೇವು | | **09.01.2025** |
| **ವಯಸ್ಸು** : **34** ವರ್ಷ | | |
| **ವೃತ್ತಿ** : ಆಟೋ ಚಾಲಕ | | **ಪ್ರಾ.ಸಾ. : 08** |
| **ವಾಸಸ್ಥಳ** : ರಾಮಾನುಜ ರೋಡ್, ಮೈಸೂರು | | **ಚಾ.ಸಾ. : 05** |

**ಮುಖ್ಯ ವಿಚಾರಣೆ : ಸರ್ಕಾರಿ ಅಭಿಯೋಜಕರಿಂದಃ**

. *4* ವರ್ಷಗಳ ಹಿಂದೆ ನಾನು ಜೆ.ಎಸ್.ಎಸ್ ಆಸ್ಪತ್ರೆಯ ಆಟೋ ಸ್ಟ್ಯಾಂಡ್ ಬಳಿ ಇದ್ದಾಗ ಪೊಲೀಸರು ನನ್ನ ಸಹಿ ಪಡೆದಿದ್ದರು ಆದರೆ ಆ ಕಾಲಕ್ಕೆ ನನ್ನ ಸಮಕ್ಷಮ ಯಾವುದೇ ಮಹಜರ್ ಮಾಡಿಲ್ಲ. ಆ ಕಾಲಕ್ಕೆ ನನಗೆ ಯಾವುದೇ ವಸ್ತುವನ್ನು ತೋರಿಸಿಲ್ಲ ಮತ್ತು ಯಾವುದೇ ವಸ್ತುಗಳನ್ನು ಅಮಾನತ್ತು ಪಡಿಸಿಕೊಂಡಿಲ್ಲ. ಈಗ ನಾನು ನೋಡುತ್ತಿರುವ ನಿ.ಪಿ-*2* ದಾಖಲೆ ನಾನು ಮಾಡಿದ್ದ ದಾಖಲೆಯಿದ್ದು ಅದರಲ್ಲಿ ನನ್ನ ಸಹಿ ಇದೆ. ಸದರಿ ಸಹಿಯನ್ನು ನಿ.ಪಿ-*2(ಬಿ)* ಎಂದು ಗುರುತಿಸಿದೆ.

*ಈ ಹಂತದಲ್ಲಿ, ಈ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಸರ್ಕಾರಿ ಅಭಿಯೋಜಕರು ಅನುಮತಿ ಕೋರಿದ್ದಾರೆ. ಸಾಕ್ಷಿಯ ಹೇಳಿಕೆಯನ್ನು ಪರಿಶೀಲಿಸಿ ಅನುಮತಿ ನೀಡಲಾಯಿತು.*

***ಪಾಟೀ ಸವಾಲುಃ ಸರ್ಕಾರಿ ಅಭಿಯೋಜಕರಿಂದಃ-***

*2.* ದಿಃ*06.10.2020* ರಂದು ಬೆಳಗ್ಗೆ *10.30* ಕ್ಕೆ ಮೈಸೂರಿನ ಜೆ.ಎಸ್.ಎಸ್ ಆಸ್ಪತ್ರೆಯ ಮುಂಭಾಗದ ಎಂ.ಜಿ.ರಸ್ತೆಯಲ್ಲಿ ಮಹಜರ್ ಮಾಡಿದ್ದರು ಎಂದರೆ ಸರಿಯಲ್ಲ. ಆ ಕಾಲಕ್ಕೆ ಎಂ.ಆರ್.ನವೀನ್ ಕುಮಾರ್ ಇವರು ದಿಃ*05.10.2020* ರ ಬೆಳಗಿನ ಜಾವ ತನ್ನ ಮೇಲೆ ಮತ್ತು ತನ್ನ ಸ್ನೇಹಿತರ ಮೇಲೆ ಹಲ್ಲೆ ಆಗಿದ್ದ ಸ್ಥಳ ಎಂದು ತೋರಿಸಿದ ಮೇರೆಗೆ ಆ ಸ್ಥಳದಲ್ಲಿ ಮಹಜರ್ ಮಾಡಿದ್ದರು ಎಂದರೆ ಸರಿಯಲ್ಲ. ಈಗ ನಾನು ನೋಡುತ್ತಿರುವ ಎಂ.ಒ-*2* ರಿಂದ *4* ಎಂದು ಗುರುತಿಸಿರುವ ವಸ್ತುಗಳನ್ನು ಆ ಕಾಲಕ್ಕೆ ಅಮಾನತ್ತು ಪಡಿಸಿಕೊಂಡಿದ್ದರು ಎಂದರೆ ಸರಿಯಲ್ಲ. ಅದೇ ಸ್ಥಳದಲ್ಲಿ ನಿ.ಪಿ-*2* ರಂತೆ ಮಹಜರ್ ಮಾಡಿ ನನಗೆ ಓದಿ ಹೇಳಿ ನನ್ನ ಸಹಿ ಪಡೆದಿದ್ದಾರೆ ಎಂದರೆ ಸರಿಯಲ್ಲ. ಈಗ ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಆ ಕಾಲಕ್ಕೆ ನಾನು ಮೇಲ್ಕಂಡ ------------ ಮಾಡಿರುತ್ತೇವೆ ಎಂದು ಹೇಳಿಕೆ ಕೊಟ್ಟಿದ್ದೆ ಎಂದರೆ ಸರಿಯಲ್ಲ. ಸದರಿ ಹೇಳಿಕೆಯನ್ನು ನಿ.ಪಿ-*7* ಎಂದು ಗುರುತಿಸಿದೆ.

**ಪಾಟೀ ಸವಾಲು : ಆರೋಪಿ ಪರ ವಕೀಲರವರಿಂದಃ- ಇಲ್ಲ**

**ಮರು ವಿಚಾರಣೆಃ- ಇಲ್ಲ.**

ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು.

*ಓ ಹೇ ಕೇ ಸ ಇ ಎ ಒ.,*

*4 ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,*
ಮೈಸೂರು